2. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಅ) ಕರ್ನಾಟಕ ಧನ ವಿನಿಯೋಗ (ಸಂಖ್ಯೆ–2) ವಿಧೇಯಕ, 2007 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2007ರ ಕರ್ನಾಟಕ ಧನ ವಿನಿಯೋಗ **(ಸಂಖ್ಯೆ–2)** ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2007ರ ಕರ್ನಾಟಕ ಧನ ವಿನಿಯೋಗ **(ಸಂಖ್ಯೆ–2)** ವಿದೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ : ಮಾನ್ಯ ಅಧ್ಯಕ್ಷರೆ,

2007ರ ಕರ್ನಾಟಕ ಧನ ವಿನಿಯೋಗ **(ಸಂಖ್ಯೆ–2)** ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–1)

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ,

2007ರ ಕರ್ನಾಟಕ ಧನ ವಿನಿಯೋಗ **(ಸಂಖ್ಯೆ–2)** ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2007ರ ಕರ್ನಾಟಕ ಧನ ವಿನಿಯೋಗ **(ಸಂಖ್ಯೆ–2)** ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಹಗೂ 3

ಅಧ್ಯಕ್ಷರು : "ಖಂಡ 2 ಹಾಗೂ 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತವೆ."

ಪ್ರಸಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಹಾಗೂ 3 ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ : ಮಾನ್ಯ ಅಧ್ಯಕ್ಷರೆ,

2007ರ ಕರ್ನಾಟಕ ಧನ ವಿನಿಯೋಗ **(ಸಂಖ್ಯೆ–2)** ವಿದೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ:

"2007ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ–2) ವಿದೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಅಧ್ಯಕ್ಷರು : ಈಗ ಪ್ರಶ್ನೋತ್ತರ ವೇಳೆಯನ್ನು ತೆಗೆದುಕೊಳ್ಳೋಣ.

ಶ್ರೀ ಎಂ.ಪಿ..ಪ್ರಕಾಶ್ : ಮಾನ್ಯ ಅಧ್ಯಕ್ಷರೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ–2007. ಈ ಒಂದು ಚಿಕ್ಕದಾದ ವಿಧೇಯಕವನ್ನು ಪರ್ಯಾಲೋಚನೆಗೆ ತೆಗೆದುಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.

ಆ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ–2007ರ ಪರ್ಯಾಲೋಚನೆ ಪ್ರಸ್ತಾವ

ಶ್ರೀ ಎಂ.ಪಿ.ಪ್ರಕಾಶ್ (ಗೃಹ ಸಚಿವರು) (ವೈದ್ಯಕೀಯ ಶಿಕ್ಷಣ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2007ನೇ ಸಾಲಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸ–ಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಎಂ.ಪಿ.ಪ್ರಕಾಶ್ : ಸನ್ಮಾನ್ಯ ಅಧ್ಯಕ್ಷರೆ, ಇದು ಒಂದು ಸಣ್ಣದಾಗಿರುವ ತಿದ್ದುಪಡಿ, ಈಗ 3ನೇ ಪ್ರಕರಣದಲ್ಲಿ ಬರುವ 1994ರ ಕರ್ನಾಟಕ ಅಧಿನಿಯಮ 40ರ 3ನೇ ಪ್ರಕರಣದ 4ನೇ ಉಪ ಪ್ರಕರಣದಲ್ಲಿ "ಬೆಂಗಳೂರಿನಲ್ಲಿ ಇರತಕ್ಕದ್ದು" ಎನ್ನುವ ಪದದ ಬದಲು "ರಾಮನಗರದಲ್ಲಿ ಇರತಕ್ಕದ್ದು" ಎನ್ನುವ ತಿದ್ದುಪಡಿಯನ್ನು ನಾನು ಮಂಡಿಸುತ್ತಿದ್ದೇನೆ. ಇದರಲ್ಲಿ ರಾಮನಗರ, ಬೆಂಗಳೂರು ನಗರದಿಂದ ಸುಮಾರು 50 ಕಿ.ಮೀ. ಅಂತರದಲ್ಲಿದ್ದು, ಬೆಂಗಳೂರಿನಲ್ಲಿ ಬಹಳ ಒತ್ತಡ ಇರುವ ಕಾರಣಕ್ಕಾಗಿಯೇ ಸುಮಾರು 310 ಕೋಟಿ ರೂಪಾಯಿಗಳಿಗೆ 247 ಎಕರೆ ಜಮೀನನ್ನು ಖರೀದಿ ಮಾಡುವುದರ ಮೂಲಕವಾಗಿ ಅಲ್ಲಿ 750 ಹಾಸಿಗೆಗಳು ಇರುವ ಆಸ್ಪತ್ರೆಯನ್ನು 250 ಹಾಸಿಗೆ ಇರುವ Hi-teck ಆಸ್ಪತ್ರೆಯನ್ನು ಮಾಡಬೇಕು ಎನ್ನುವ